**ದಿನಾಂಕ 22.07.2019 ರಂದು ಸಾಕ್ಷಿದಾರರನ್ನು ಕರೆಸಿ ಪ್ರಮಾಣವಚನ ಬೋಧಿಸಲಾಯಿತು.**

**ಮುಖ್ಯ ವಿಚಾರಣೆಃ- ಶ್ರೀ ಎಸ್ಆರ್ಎ ವಕೀಲರಿಂದಃ**

ನಾನು ಈ ದಾವೆಯಲ್ಲಿ 4ನೇ ವಾದಿಯಾಗಿರುತ್ತೇನೆ. ನಾನು ನನ್ನ ಮುಖ್ಯ ವಿಚಾರಣೆಯ ಬದಲಾಗಿ ಪ್ರಮಾಣ ಪತ್ರವನ್ನು ಹಾಜರುಪಡಿಸಿದ್ದೇನೆ. ಅದನ್ನು ನಾನು ನನ್ನ ವಕೀಲರಿಗೆ ಹೇಳಿ ಬರೆಸಿರುತ್ತೇನೆ. ಅದರಲ್ಲಿರುವ ಸಂಗತಿಗಳೆಲ್ಲಾ ಸತ್ಯವಿರುತ್ತದೆ ಮತ್ತು ಅದರಲ್ಲಿರುವ ಸಹಿ ನನ್ನದೇ ಆಗಿರುತ್ತದೆ.

ನಾನು ನನ್ನ ದಾವೆಯ ಜೊತೆಗೆ ಹಾಗೂ ಮಧ್ಯಾಂತರ ಅರ್ಜಿಯ ಜೊತೆಗೆ ಕೆಲವು ದಾಖಲೆಗಳನ್ನು ಹಾಜರು ಪಡಿಸಿರುತ್ತೇನೆ. ದಿನಾಂಕ 16.04.1975 ರ ನೋಂದಾಯಿತ ಕ್ರಯ ಪತ್ರವನ್ನು ಹಾಜರು ಪಡಿಸಿದ್ದೇನೆ. ಅದನ್ನು ನಿಪಿ-1 ಎಂದು ಗುರುತಿಸಲಾಯಿತು. ದಿನಾಂಕ 08.06.1994 ರ ನೋಂದಾಯಿತ ಕ್ರಯ ಪತ್ರವನ್ನು ಹಾಜರು ಪಡಿಸಿದ್ದೇನೆ. ಅದನ್ನು ನಿಪಿ-2 ಎಂದು ಗುರುತಿಸಲಾಯಿತು. ದಿನಾಂಕ 04.02.1995 ರ ನೋಂದಾಯಿತ ಕ್ರಯ ಪತ್ರವನ್ನು ಹಾಜರು ಪಡಿಸಿದ್ದೇನೆ. ಅದನ್ನು ನಿಪಿ-3 ಎಂದು ಗುರುತಿಸಲಾಯಿತು. ದಿನಾಂಕ 25.11.2002 ರ ನೋಂದಾಯಿತ ಕ್ರಯ ಪತ್ರದ ಧೃಡೀಕೃತ ನಕಲನ್ನು ಹಾಜರು ಪಡಿಸಿದ್ದೇನೆ. ಅದನ್ನು ನಿಪಿ-4 ಎಂದು ಗುರುತಿಸಲಾಯಿತು. ಆರು ಕಬ್ಬು ಮಾರಾಟ ಮಾಡಿದ ರಸೀದಿಯನ್ನು ಹಾಜರು ಪಡಿಸಿದ್ದೇನೆ. ಅವುಗಳನ್ನು ನಿಪಿ-5 ರಿಂದ 10 ಎಂದು ಗುರುತಿಸಲಾಯಿತು. ನಾಲ್ಕು ಪಿಎಸಿಎಲ್‌ನ ಪಾವತಿ ರಸೀದಿಯನ್ನು ಹಾಜರು ಪಡಿಸಿದ್ದೇನೆ. ಅವುಗಳನ್ನು ನಿಪಿ- 11 ರಿಂದ 14 ಎಂದು ಗುರುತಿಸಲಾಯಿತು. ಸರ್ವೆ ನಂಬರ್ 22ಕ್ಕೆ ಸಂಬಂಧಿಸಿದ ಒಂದು ಪಹಣಿ ಪತ್ರಿಕೆಯನ್ನು ಹಾಜರು ಪಡಿಸಿದ್ದೇನೆ. ಅದನ್ನು ನಿಪಿ-15 ಎಂದು ಗುರುತಿಸಲಾಯಿತು. ಸರ್ವೆ ನಂಬರ್ 22/ಡಿ2 ಕ್ಕೆ ಸಂಬಂಧಿಸಿದ ಒಂದು ಪಹಣಿ ಪತ್ರಿಕೆಯನ್ನು ಹಾಜರು ಪಡಿಸಿದ್ದೇನೆ. ಅದನ್ನು ನಿಪಿ-16 ಎಂದು ಗುರುತಿಸಲಾಯಿತು. ದಾವಾ

ಶೆಡ್ಯೂಲ್ ಡಿ ಆಸ್ತಿಗೆ ಸಂಬಂಧಿಸಿದ ಎರಡು ಪಹಣಿ ಪತ್ರಿಕೆಯನ್ನು ಹಾಜರು ಪಡಿಸಿದ್ದೇನೆ. ಅವುಗಳನ್ನು ನಿಪಿ-17 ಮತ್ತು 18 ಎಂದು ಗುರುತಿಸಲಾಯಿತು.

ದಾವಾ ಶೆಡ್ಯೂಲ್ ಎ ಆಸ್ತಿಗೆ ಸಂಬಂಧಿಸಿದಂತೆ ಎರಡು ಪಹಣಿ ಪತ್ರಿಕೆಯನ್ನು ಹಾಜರು ಪಡಿಸಿದ್ದೇನೆ. ಅವುಗಳನ್ನು ನಿಪಿ-19 ಮತ್ತು 20 ಎಂದು ಗುರುತಿಸಲಾಯಿತು. ದಾವಾ ಶೆಡ್ಯೂಲ್ ಡಿ ಆಸ್ತಿಗೆ ಸಂಬಂಧಿಸಿದಂತೆ ಒಂದು ಪಹಣಿ ಪತ್ರಿಕೆಯನ್ನು ಹಾಜರು ಪಡಿಸಿದ್ದೇನೆ. ಅದನ್ನು ನಿಪಿ-21 ಎಂದು ಗುರುತಿಸಲಾಯಿತು. ದಾವಾ ಆಸ್ತಿಗೆ ಸಿ ಶೆಡ್ಯೂಲ್ ಸಂಬಂಧಿಸಿದ ಒಂಭತ್ತು ಭಾವ ಚಿತ್ರಗಳನ್ನು ಹಾಜರು ಪಡಿಸಿದ್ದೇನೆ. ಅವುಗಳನ್ನು ನಿಪಿ-22 ಮತ್ತು 30 ಎಂದು ಗುರುತಿಸಲಾಯಿತು. ಸದರಿ ಭಾವಚಿತ್ರಕ್ಕೆ ಸಂಬಂಧಿಸಿದ ಒಂದು ಸಿಡಿಯನ್ನು ಹಾಜರು ಪಡಿಸಿದ್ದೇನೆ. ಅದನ್ನು ನಿಪಿ 31 ಎಂದು ಗುರುತಿಸಲಾಯಿತು.

**ವಾದಿ ಪರ ವಕೀಲರು ಮುಂದುವರೆದ ಮುಖ್ಯ ವಿಚಾರಣೆಗೆ ಸಮಯಾವಕಾಶ ಕೋರಿದ್ದರಿಂದ ಮುಂದೂಡಲಾಯಿತುಃ**

*(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಿಂದ ಬೆರಳಚ್ಚು ಪಡಿಸಲಾಯಿತು.)*

ಓ ಹೇ ಕೇ ಸ ಇದೆ,

(ಸಂತೋಷ ಕೊಠಾರಿ)
ಅಪರ ಸಿವಿಲ್‌ನ್ಯಾಯಾಧೀಶರು ಮತ್ತು
ಪ್ರ.ದ.ನ್ಯಾ.ದಂ. ಕೊಳ್ಳೇಗಾಲ.